# ಎ.ಜೆ.ಇಂಜಿನಿಯರಿಂಗ್ ಕಾಲೇಜಿನಲ್ಲಿ ಪ್ರಶಿಕ್ಷಣ ಕಾರ್ಯಕ್ರಮ

ಲಕ್ಷ್ಮೀ ಮೆಮೋರಿಯಲ್ ಎಜುಕೇಷನ್ ಟ್ರಸ್ಟ್, ಮಂಗಳೂರು ಇದರ ಅಂಗಸಂಸ್ಥೆಯಾದ ಎ.ಜೆ.ಇಂಜಿನಿಯರಿಂಗ್ ಮತ್ತು ತಾಂತ್ರಿಕ ಮಹಾವಿದ್ಯಾಲಯದ ಪ್ರಥಮ ವರ್ಷದ ವಿದ್ಯಾರ್ಥಿಗಳಿಗೆ ಆಗಸ್ಟ್ 17, 2017 ರಂದು ಪ್ರಶಿಕ್ಷಣ ಕಾರ್ಯಕ್ರಮವು ಎ.ಜೆ.ಅಡಿಟೋರಿಯಂ ಕುಂಟಿಕಾನ ಇಲ್ಲಿ ಜರುಗಿತು. ಮುಖ್ಯ ಅತಿಥಿಗಳಾದ ಡಾ. ಅನಂತನಾರಾಯಣ ವಿ.ಎಸ್., ಡೀನ್ ಎನ್.ಐ.ಟಿ.ಕೆ. ಸುರತ್ಕಲ್ ಇವರು ದೀಪ ಪ್ರಜ್ವಲಿಸಿ ವಿದ್ಯಾರ್ಥಿಗಳು ಧನಾತ್ಮಕ ಚಿಂತನೆಗಳನ್ನು ತನ್ನ ಜೀವನದಲ್ಲಿ ಅಳವಡಿಸುವುದರ ಮೂಲಕ ತಮ್ಮ ಜೀವನವನ್ನು ಯಶಸ್ವಿಗೊಳಿಸಬಹುದು ಎಂದು ಕರೆ ನೀಡಿ ವಿದ್ಯಾರ್ಥಿಗಳನ್ನು ಹುರಿದುಂಬಿಸಿದರು. ಲಕ್ಷ್ಮೀ ಮೆಮೋರಿಯಲ್ ಎಜುಕೇಶನ್ ಟ್ರಸ್ಟ್‌ನ ಅಧ್ಯಕ್ಷರಾಗಿರುವ ಡಾ. ಎ. ಜೆ. ಶೆಟ್ಟಿಯವರು ಕಾರ್ಯಕ್ರಮದ ಅಧ್ಯಕ್ಷತೆಯನ್ನು ವಹಿಸಿದರು. ಟ್ರಸ್ಟ್‌ನ ಉಪಾಧ್ಯಕ್ಷರಾದ ಶ್ರೀ ಪ್ರಶಾಂತ್ ಶೆಟ್ಟಿ ಉಪಸ್ಥಿತರಿದ್ದರು. ಸಿವಿಲ್ ವಿಭಾಗದ ಮುಖ್ಯಸ್ಥರಾದ ಡಾ. ಅಕ್ಷತಾ ಶೆಟ್ಟಿ ಸ್ವಾಗತಿಸಿದರು. ಕಾಲೇಜಿನ ಪ್ರಾಂಶುಪಾಲರಾದ ಡಾ. ಶಾಂತಾರಾಮ ರೈ ಸಿ. ಯವರು ವಿದ್ಯಾರ್ಥಿಗಳಿಗೆ ಕಾಲೇಜಿನಲ್ಲಿ ದೊರಕುವ ವಿವಿಧ ಸೌಲಭ್ಯಗಳ ಬಗ್ಗೆ ವಿವರಿಸಿದರು. ಕಾಲೇಜಿನ ವಾರ್ಷಿಕ ಸಂಚಿಕೆ "ಎ.ಜೆ. ಸ್ಪಾರ್ಕಲ್"ನ್ನು ಅಧ್ಯಕ್ಷರಾದ ಡಾ. ಎ. ಜೆ. ಶೆಟ್ಟಿಯವರು ಬಿಡುಗಡೆಗೊಳಿಸುತ್ತಾ ಮುಂದಿನ ದಿನಗಳಲ್ಲಿ ತಮ್ಮ ವಿದ್ಯಾಸಂಸ್ಥೆಯಲ್ಲಿ ಇನ್ನೂ ಹೆಚ್ಚಿನ ಸೌಲಭ್ಯಗಳನ್ನು ನೀಡುವುದರ ಮೂಲಕ ಮಾದರಿ ವಿದ್ಯಾಸಂಸ್ಥೆಯಾಗಿ ಮಾರ್ಪಡಿಸುವ ನಿಟ್ಟಿನಲ್ಲಿ ಪ್ರಯತ್ನವನ್ನು ಮಾಡುತ್ತೇವೆ ಎಂಬ ಆಶ್ವಾಸನೆಯನ್ನು ನೀಡಿದರು. ಎಚ್‌ಒಡಿಗಳಾದ ಡಾ. ರಾಜೇಶ್ ರೈ, ಡಾ. ಆಂಟೋನಿ ಪಿ. ಜೆ., ಡಾ. ನಾಗೇಶ್ ಎಚ್., ಡಾ. ಶಾಂತಕುಮಾರಿ ಕೆ., ಡಾ. ಎಮ್. ಕಿಶೋರ್ ಶೆಟ್ಟಿ, ಡಾ. ಸುಜಯಾ ಸಿ. ಉಪಸ್ಥಿತರಿದ್ದರು. ಶ್ರೀಮತಿ ವಿನೀತ ಪೈಸ್ ಕಾರ್ಯಕ್ರಮ ನಿರೂಪಿಸಿದರು ಹಾಗೂ ಡಾ. ಶೋಭಿತ ಶೆಟ್ಟಿಯವರು ವಂದನಾರ್ಪಣೆ ಗೈದರು.


A. J. Institute


A. J. Institute

